**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಜಗಳೂರು**

**ಸಿ ಸಿ ನಂಃ291/2018**

**ಚಾಸಾ-15/ಪ್ರಾಸಾ-3**

**ಪ್ರಮಾಣ ವಚನ ಭೋಧಿಸಲಾಯಿತು.** ದಿನಾಂಕಃ**20.11.2025**

ಹೆಸರು : ಬಿ ಪ್ರಕಾಶ್ ತಂದೆ ಭೀಮಣ್ಣ ಶೆಟ್ಟಿ

ವಯಸ್ಸು : **65** ವರ್ಷ

ಉದ್ಯೋಗ : ನಿವೃತ್ತ ಪಿ ಎಸ್ ಐ

ವಿಳಾಸ : ದಾವಣಗೆರೆ

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ**

ನಾನು ಆಗಸ್ಟ್ **2015** ರಿಂದ ನವೆಂಬರ್ **2018** ರ ವರೆಗೂ ಬಿಳಿಚೋಡು ಪೋಲಿಸ್ ಠಾಣೆಯಲ್ಲಿ ಎಎಸ್ ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ**20.06.2017** ರಂದು ಮಧ್ಯಾಹ್ನ **3.30** ಗಂಟೆಗೆ, ಚಾಸಾ-**1** ಇವರು ಠಾಣೆಗೆ ಹಾಜರಾಗಿ ಒಂದು ಹೇಳಿಕೆ ದೂರನ್ನು ಸಲ್ಲಿಸಿರುತ್ತಾರೆ. ಸದರಿ ಪಿರ್ಯಾದಿಯ ಆಧಾರದ ಮೇಲೆ ನಮ್ಮ ಠಾಣಾ ಗುನ್ನೆ ನಂಃ**102/2017** ರಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಸಾಕ್ಷಿ ನೋಡಿ ಗುರುತಿಸಿದ ಪಿರ್ಯಾದಿ ಈಗಾಗಲೇ ನಿ.ಪಿ.**1** ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ**1(ಬಿ)** ಎಂದು ಗುರುತಿಸಲಾಯಿತು. ಅದೇ ರೀತಿ ಸಾಕ್ಷಿ ನೋಡಿ ಗುರುತಿಸಿದ ಪ್ರಥಮ ವರ್ತಮಾನ ವರದಿಯನ್ನು ನಿ.ಪಿ.**2** ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.**2(ಎ)** ಎಂದು ಗುರುತಿಸಲಾಯಿತು. ದಿಃ**22.06.2017** ರಂದು ಗುನ್ನಾ ಸ್ಥಳಕ್ಕೆ ಬೇಟಿ ಕೊಟ್ಟು ಪಂಚರಾದ ಚಾಸಾ-**12** ಮತ್ತು **13** ಇವರ ಸಮಕ್ಷಮ ಚಾಸಾ-**1** ರವರು ತೋರಿಸಿದ ಸ್ಥಳದಲ್ಲಿ ಮಧ್ಯಾಹ್ನ **1.30**

ಗಂಟೆಯಿಂದ **2.30** ಗಂಟೆಯವರಗೆ ಸ್ಥಳ ಪಂಚನಾಮೆಯನ್ನು ಮಾಡಿರುತ್ತೇನೆ. ಸದರಿ ಪಂಚನಾಮೆ ಕಾಲಕ್ಕೆ ಚಾಸಾ-**1** ರವರು ಹಾಜರುಪಡಿಸಿದ **5** ಕಲ್ಲುಗಳನ್ನು ಪಂಚರ ಸಮಕ್ಷಮ ಜಪ್ತಿ ಪಡಿಸಿಕೊಂಡಿರುತ್ತೇನೆ. ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಮು.ಮಾ.**1** ಕಲ್ಲುಗಳನ್ನು ನೋಡಿ ಗುರುತಿಸಿರುತ್ತಾರೆ. ಅದೇ ರೀತಿ ಸಾಕ್ಷಿ ನೋಡಿ ಗುರುತಿಸಿದ ಸ್ಥಳ ಪಂಚನಾಮೆಯನ್ನು ನಿ.ಪಿ.**3** ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿ.ಪಿ.**3(ಎ)** ಎಂದು ಗುರುತಿಸಲಾಯಿತು. ಸದರಿ ಪಂಚನಾಮೆ ಕಾಲಕ್ಕೆ ಗುನ್ನಾ ಸ್ಥಳದ ಕಚ್ಚಾ ನಕಾಶೆಯನ್ನು ತಯಾರಿಸಿ ಪೋಟೋಗಳನ್ನು ಪಡೆದಿರುತ್ತೇನೆ. ಸಾಕ್ಷಿ ನೋಡಿ ಗುರುತಿಸಿದ ಕಚ್ಚಾ ನಕಾಶೆಯನ್ನು ನಿ.ಪಿ.**4** ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.**4(ಎ)** ಎಂದು ಗುರುತಿಸಲಾಯಿತು. ಸಾಕ್ಷಿ ನೋಡಿ ಗುರುತಿಸಿದ ಪೋಟೋಗಳನ್ನು ನಿ.ಪಿ.**5** ಎಂದು ಗುರುತಿಸಲಾಯಿತು. ದಿಃ**29.06.2017** ಚಾಸಾ-**14** ಇವರಿಂದ ಈ ಪ್ರಕರಣದ ಗಾಯಳುವಾದ ಚಾಸಾ-**1** ರಿಂದ **5** ಇವರು ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿ ನೋಡಿ ಗುರುತಿಸಿದ ಗಾಯದ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು , ಅವುಗಳನ್ನು ಕ್ರಮವಾಗಿ ನಿ.ಪಿ.**5** ರಿಂದ **9** ಎಂದು , ಮತ್ತು ಸಾಕ್ಷಿಯ ಸಹಿಯನ್ನು ನಿ.ಪಿ.**5 (ಎ)** ರಿಂದ **9(ಎ)** ಎಂದು ಗುರುತಿಸಲಾಯಿತು.

ದಿಃ**30.06.2017** ರಂದು ಸಾಕ್ಷಿಗಳಾದ ಚಾಸಾ-**2** ರಿಂದ **5** ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ . ದಿಃ**10.01.2018** ರಂದು ಚಾಸಾ-**1** ರಿಂದ **5** ರವರು ಮರುಹೇಳಿಕೆ ಹಾಗೂ ಚಾಸಾ-**6** ರಿಂದ **11** ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ . ದಿಃ**01.06.2018** ರಂದು ತನಿಖೆ ಪೂರ್ಣಗೊಳಿಸಿ ನಾನು ಆರೋಪಿತರ ವಿರುದ್ದ ದೋಷಾರೋಪಣ ಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

(ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿಯನ್ನು ಪ್ರತಿಕೂಲ ಭಾಗಶಃ ಸಾಕ್ಷಿ ಎಂದು ಪರಿಗಣಿಸಿ ಸದರಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಸೂಕ್ತ ಕಾರಣಗಳನ್ನು ನೀಡಿದ ಮೇರೆಗೆ ಪಾಟೀ ಸವಾಲಿಗೆ ಅವಕಾಶ ನೀಡಲಾಯಿತು).

**<u>ಪಾಟೀ ಸವಾಲುಃ</u>** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**-**

ಮು**.**ಮು**.1** ಕಲ್ಲುಗಳನ್ನು ಘಟನಾ ಸ್ಥಳದಲ್ಲಿ ಚಾಸಾ**-3** ರವರು ಹಾಜರುಪಡಿಸುತ್ತಾರೆ ಎಂದರೆ ಸರಿ.

**<u>ಪಾಟೀ ಸವಾಲುಃ- ಆರೋಪಿ ಪರ H.B., ವಕೀಲರಿಂದಃ-</u>**

ಚಾಸಾ**-1** ರವರು ನಿಪಿ **1** ರಂತೆ ದೂರನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ **.** ನಾನು ಈ ಪ್ರಕರಣದ ಗುನ್ಹಾ ಸ್ಥಳಕ್ಕೆ ಬೇಟಿ ಕೊಟ್ಟಿರುವುದಿಲ್ಲ ಮತ್ತು ಸದರಿ ಸ್ಥಳದಲ್ಲಿ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ**.** ಮು**.**ಮಾ**.1** ಕಲ್ಲು ಸಾಮಾನ್ಯವಾಗಿ ಎಲ್ಲಾ ಕಡೆ ಸಿಗುತ್ತವೆ ಎಂದರೆ ಸರಿಯಲ್ಲ **.** ಮು**.**ಮಾ**.1** ಕಲ್ಲು ಘಟನೆ ಗೆ ಸಂಬಂದ ಇರುವುದಿಲ್ಲ ಎಂದರೆ ಸರಿಯಲ್ಲ **.** ನಿಪಿ **5** ಪೋಟೋಗಳನ್ನು ಸ್ಥಳದಲ್ಲಿ ತಗೆದಿರುವುದಿಲ್ಲ ಎಂದರೆ ಸರಿಯಲ್ಲ **.** ದಿಃ**30.06.2017** ರಂದು ಸಾಕ್ಷಿಗಳಾದ ಚಾಸಾ**-2** ರಿಂದ **5** ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ **.** ದಿಃ**10.01.2018** ರಂದು ಚಾಸಾ**-1** ರಿಂದ **5** ರವರು ಮರುಹೇಳಿಕೆ ಹಾಗೂ ಚಾಸಾ**-6** ರಿಂದ **11** ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ**.** ದಿಃ**29.06.2017** ಚಾಸಾ**-14** ಇವರಿಂದ ಈ ಪ್ರಕರಣದ ಗಾಯಳುವಾದ ಚಾಸಾ**-1** ರಿಂದ **5** ಇವರು ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ**.** ದಿಃ**01.06.2018** ರಂದು ತನಿಖೆ ಪೂರ್ಣಗೊಳಿಸಿ ನಾನು ಆರೋಪಿತರ ವಿರುದ್ಧ ದೋಷಾರೋಪಣ ಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ**.** ನಾನು ಈ ಬಗ್ಗೆ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ**.**

**<u>ಮರು ವಿಚಾರಣೆಃ</u> ಇರುವುದಿಲ್ಲ.**

**(**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿರುತ್ತಾರೆ**.)**

ಓ ಹೇ ಕೇ ಸರಿ ಇದೆ

**Sd/-**

ಪ್ರ**.**ದ**.**ನ್ಯಾ**.**ದಂ**.,** ಜಗಳೂರು